**All India Radio: Bangalore**
**Regional Bulletin In Kannada**
**18.04.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.04.2026 / 2.30 p.m.**

**<><><><>**

ಮುಖ್ಯಾಂಶಗಳು

1. ಮಾನವೀಯ ಅಂಶ ಮತ್ತು ತಂತ್ರಜ್ಞಾನದ ಸಮತೋಲನ ಖಚಿತಪಡಿಸಿಕೊಳ್ಳುವಂತೆ ನ್ಯಾಯಾಂಗ ಅಧಿಕಾರಿಗಳಿಗೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಕರೆ
2. ೪೦ ವರ್ಷ ಪೂರೈಸಿದ ಕರ್ನಾಟಕ ಲೋಕಾಯುಕ್ತ ಸಂಸ್ಥೆ ; ಇಂದು ವಿಶೇಷ ಕಾರ್ಯಕ್ರಮ
3. ಸಂವಿಧಾನದ ೧೩೧ನೇ ತಿದ್ದುಪಡಿ ವಿಫಲಗೊಳಿಸಿದ ವಿರೋಧ ಪಕ್ಷಗಳ ಕುರಿತು ಬಿಜೆಪಿ ನಾಯಕರ ಅಸಮಾಧಾನ
4. ಐಪಿಎಲ್ ಟಿ-೨೦ ಕ್ರಿಕೆಟ್ : ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><><><>

ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿ ರುವ ಡಾ.ಬಾಬು ರಾಜೇಂದ್ರ ಪ್ರಸಾದ್ ಅಂತಾರಾಷ್ಟ್ರೀಯ ಸಮ್ಮೇಳನ ಕೇಂದ್ರದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಕರ್ನಾಟಕ ರಾಜ್ಯ ನ್ಯಾಯಾಂಗ ಅಧಿಕಾರಿಗಳ ಸಂಘದ ೨೨ನೇ ದ್ವೈವಾರ್ಷಿಕ ರಾಜ್ಯಮಟ್ಟದ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಅರವಿಂದ ಕುಮಾರ್, ನಾಗರತ್ನ, ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಸಂಘದ ಅಧ್ಯಕ್ಷರಾದ ನಾಗಶ್ರೀ, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಶೆಟ್ಟಿಗಾರ್ ಪಾಲ್ಗೊಂಡಿದ್ದರು. ಕೃತಕಬುದ್ಧಿಮತ್ತೆ ಯುಗದಲ್ಲಿ ನ್ಯಾಯಾಂಗದ ಮರುಚಿಂತನೆ ಎಂಬ ವಿಷಯದ ಮೇಲೆ ನಡೆದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯವನ್ನು ವ್ಯಾಖ್ಯಾನಿಸುವ ಮಾನವೀಯ ಅಂಶಗಳನ್ನು ತಂತ್ರಜ್ಞಾನ ಮತ್ತಷ್ಟು ವೃದ್ಧಿಸಲು ಪೂರಕವಾಗಿರುವಂತೆ ಖಚಿತಪಡಿಸಿಕೊಳ್ಳಬೇಕು ಎಂದು ನ್ಯಾಯಾಂಗ ಅಧಿಕಾರಿಗಳಿಗೆ ಕರೆ ನೀಡಿದರು. ನ್ಯಾಯಾಂಗ

ತಾಂತ್ರಿಕವಾಗಿ ಮುಂದುವರಿಯುವ ಜೊತೆಗೆ ತಾತ್ವಿಕವಾಗಿ ದೃಢವಾಗಿರಬೇಕು ಎಂದ ಅವರು, ದಕ್ಷತೆಯನ್ನು ಹೆಚ್ಚಿಸಲು ಅದರ ಪ್ರಯೋಜನ ಬಳಸಿಕೊಳ್ಳಬೇಕು. ಆದರೆ ನ್ಯಾಯದ ಪ್ರಮುಖ ಅಂಶವಾಗಿರುವ ಮಾನವನ ಬುದ್ಧಿಶಕ್ತಿ, ಅನುಭವ ಮತ್ತು ಸಾಂವಿಧಾನಿಕ ಪ್ರಜ್ಞೆಯನ್ನು ಸಂರಕ್ಷಿಸಬೇಕು ಎಂದು ತಿಳಿಸಿದರು.

**ಧ್ವನಿ: ಸಿಜೆಐ ಸೂರ್ಯಕಾಂತ್**

ಇದೇ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ತಂತ್ರಜ್ಞಾನ ವೇಗವಾಗಿ ಬದಲಾಗುತ್ತಿರುವ ಈ ಕಾಲಘಟ್ಟದಲ್ಲಿ ನ್ಯಾಯಾಂಗ ವ್ಯವಸ್ಥೆ ಎದುರಿಸುತ್ತಿರುವ ಸವಾಲುಗಳು ಮತ್ತು ಅವಕಾಶಗಳ ಬಗ್ಗೆ ಬೆಳಕು ಚೆಲ್ಲಿದರು.

ಕಾನೂನು ಮತ್ತು ತಂತ್ರಜ್ಞಾನ ಪ್ರತ್ಯೇಕ ಕ್ಷೇತ್ರಗಳಾಗಿ ಉಳಿದಿಲ್ಲ, ಬದಲಿಗೆ ಆಡಳಿತ ಮತ್ತು ಹಕ್ಕುಗಳನ್ನು ರೂಪಿಸುವ ಅಂತರ್ ಸಂಪರ್ಕಿತ ಶಕ್ತಿಗಳಾಗಿವೆ. ಕೃತಕಬುದ್ಧಿಮತ್ತೆ, ನ್ಯಾಯಾಂಗ ಸಂಶೋಧನೆಯ ವೇಗ ಹೆಚ್ಚಿಸುವ ಜೊತೆಗೆ ಬಾಕಿಯಿರುವ ಪ್ರಕರಣಗಳ ಸಂಖ್ಯೆಯನ್ನು ಕಡಿಮೆಮಾಡಲು ಸಹಕಾರಿ ಎಂದು ತಿಳಿಸಿದರು. ನ್ಯಾಯದಾನ ಪ್ರಕ್ರಿಯೆಯಲ್ಲಿ ತಂತ್ರಜ್ಞಾನ ಪಾರದರ್ಶಕತೆ ಮತ್ತು ದಕ್ಷತೆ ತರಬಹುದಾದರೂ ಅದು ಸಾಮಾಜಿಕ ಅಸಮಾನತೆಗಳನ್ನು ಮತ್ತಷ್ಟು ಆಳಗೊಳಿಸಬಾರದು ಎಂದರು. ನ್ಯಾಯದಾನ, ಬುದ್ಧನಕರುಣೆ ಮತ್ತು ಬಸವಣ್ಣನವರ ಸಮಾನತೆಯ ತತ್ವಗಳ ಮೇಲೆ ಆಧಾರಿತವಾಗಿ ಮಾನವೀಯವಾಗಿರಬೇಕು ಎಂದ ಮುಖ್ಯಮಂತ್ರಿ, ದಕ್ಷಿಣ ಭಾರತದಲ್ಲಿ ಸುಪ್ರೀಂಕೋರ್ಟ್‌ನ ಪೀಠವನ್ನು ಸ್ಥಾಪಿಸುವುದು ನ್ಯಾಯದ ಲಭ್ಯತೆಯನ್ನು ಹೆಚ್ಚಿಸಲು ಅತ್ಯಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

<><><><>

ಬೆಂಗಳೂರಿನ ಖಾಸಗಿ ಹೋಟೇಲ್‌ನಲ್ಲಿಂದು ಸುಸ್ಥಿರ ಇಂಧನ-೨೦೪೭ರ ಭಾರತಕ್ಕಾಗಿ ಕಾರ್ಯಸೂಚಿ : ಇಂಧನ ನ್ಯಾಯಕ್ಕಾಗಿ ಕಾನೂನು ನೀತಿ ಮತ್ತು ನಾವೀನ್ಯತೆಗಳ ಮರುಚಿಂತನೆ ಎಂಬ ವಿಷಯದ ಕುರಿತು ೨ ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ಭಾರತದ ಇಂಧನ ಪರಿವರ್ತನೆ, ನೀತಿ ಮತ್ತು ಆಡಳಿತದ ಕುರಿತು ಸಂವಾದ ನಡೆಸಲು ಈ ಕಾರ್ಯಕ್ರಮ ವೇದಿಕೆ ಕಲ್ಪಿಸಿದ್ದು, ೨೦೪೭ರ ವೇಳೆಗೆ ಇಂಧನ ಭದ್ರತೆ ಮತ್ತು ಸುಸ್ಥಿರತೆಯನ್ನು

ಕಂಡುಕೊಳ್ಳುವ ರಾಷ್ಟ್ರೀಯ ದೃಷ್ಟಿಕೋನದೊಂದಿಗೆ ಈ ಸಮಾವೇಶ ಹೊಂದಿಕೆಯಾಗುತ್ತಿದೆ. ಸಮ್ಮೇಳನದಲ್ಲಿ ರಾಜ್ಯ ಸರ್ಕಾರದ ಇಂಧನ ಇಲಾಖೆ ಕೈಗೊಂಡಿರುವ ಹಲವು ಉಪಕ್ರಮಗಳು ಮುನ್ನೆಲೆಗೆ ಬರಲಿವೆ.

<><><>

ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಇಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುರಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಜರುಗಲಿದೆ. ಈ ಸಂದರ್ಭದಲ್ಲಿ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು. ಸಭಾ ಕಾರ್ಯಕ್ರಮದ ನಂತರ ವಿಶೇಷ ವಿಚಾರಗೋಷ್ಠಿಗಳು ನಡೆಯಲಿವೆ.

<><><>

ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು ಇತ್ತೀಚೆಗೆ ಹೊರಡಿಸಿರುವ ವಿದ್ಯುತ್ ದರ ಏರಿಕೆ ಮತ್ತು ಹಿಂಬದಿ ಬಿಲ್ಲಿಂಗ್ ಅನ್ವಯಿಸುವ ಆದೇಶದ ಕುರಿತು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಉಮಾ ರೆಡ್ಡಿ ಅವರು ತೀವ್ರ ಆತಂಕ ವ್ಯಕ್ತಪಡಿಸಿದ್ದಾರೆ. ಈ ನಿರ್ಧಾರವು ರಾಜ್ಯದ ಕೈಗಾರಿಕಾ ವಲಯಕ್ಕೆ, ಅದರಲ್ಲೂ ವಿಶೇಷವಾಗಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಚೇತರಿಸಿಕೊಳ್ಳಲಾಗದ ಆಘಾತ ನೀಡಲಿದೆ ಎಂದು ಅವರು ಎಚ್ಚರಿಸಿದ್ದಾರೆ. ಬೆಸ್ಕಾಂ ವ್ಯಾಪ್ತಿಯಲ್ಲಿ ಪ್ರತಿ ಯೂನಿಟ್‌ಗೆ ೫೬ ಪೈಸೆ ಮತ್ತು ಸೆಸ್ಕ್ ವ್ಯಾಪ್ತಿಯಲ್ಲಿ ೧೬ ಪೈಸೆಯಷ್ಟು

ದರ ಏರಿಕೆಯಾಗಿರುವುದು ಹಾಗೂ ಅದರ ಮೇಲೆ ಶೇಕಡ ೯ರಷ್ಟು ವಿದ್ಯುತ್ ತೆರಿಗೆ ವಿಧಿಸಿರುವುದು ಉದ್ಯಮಗಳ ಆರ್ಥಿಕ ಹೊರೆ ಹೆಚ್ಚಿಸಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><>

ಲೋಕಸಭೆಯಲ್ಲಿ ಸಂವಿಧಾನದ ೧೩೧ನೇ ತಿದ್ದುಪಡಿ ಮಸೂದೆಗೆ ಅಗತ್ಯ ಬಹುಮತ ದೊರೆಯದ ಹಿನ್ನೆಲೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಮಸೂದೆಯ ಸೋಲು ಕರಾಳ ಇತಿಹಾಸದ ಪುನರಾವರ್ತನೆ ಎಂದು ಬಣ್ಣಿಸಿದ್ದಾರೆ.

ಮೂರು ದಶಕಗಳು ಕಳೆದರೂ ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ಮನಸ್ಥಿತಿ ಬದಲಾಗಿಲ್ಲ ಎಂಬುದಕ್ಕೆ ಈ ಬೆಳವಣಿಗೆ ಸಾಕ್ಷಿ ಎಂದು ಅವರು ಟೀಕಿಸಿದ್ದಾರೆ. ಈ ಹಿಂದೆ ಹೆಚ್.ಡಿ.ದೇವೇಗೌಡ ಅವರ ನೇತೃತ್ವದ ಸಂಯುಕ್ತ ರಂಗ ಸರ್ಕಾರ ಲೋಕಸಭೆ, ವಿಧಾನಸಭೆಗಳಲ್ಲಿ ಮಹಿಳೆಯರಿಗೆ ೩೩ ಪ್ರತಿಶತ ಮೀಸಲು ನೀಡುವ ಕ್ರಾಂತಿಕಾರಿ ನಿರ್ಧಾರ ಕೈಗೊಂಡಿದ್ದು, ಅಂದೂ ಕೂಡ ಕಾಂಗ್ರೆಸ್ ಮತ್ತು ಮಿತ್ರಪಕ್ಷಗಳು ಈ ಪ್ರಯತ್ನವನ್ನು ಸಂಘಟಿತವಾಗಿ ವಿಫಲಗೊಳಿಸಿದ್ದವು ಎಂದು ಸ್ಮರಿಸಿದರು.

<><><>

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಮಹಿಳಾ ಮೀಸಲಾತಿ ಮಸೂದೆಯನ್ನು ಕಾಂಗ್ರೆಸ್ ಹಾಗೂ ಕೆಲ ವಿರೋಧ ಪಕ್ಷಗಳು ವಿರೋಧಿಸುತ್ತಿರುವುದು ಸಮಾನತೆಗೆ ವಿರೋಧವಾಗಿದ್ದು ಇದನ್ನು ಖಂಡಿಸುವುದಾಗಿ ಮಾಜಿ ಮುಖ್ಯಮಂತ್ರಿ, ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ. ಚಿಕ್ಕಮಗಳೂರು ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಹಿಳೆಯರಿಗೆ ರಾಜಕೀಯದಲ್ಲಿ ಅವಕಾಶ ನೀಡಬೇಕಾದರೆ ಮೀಸಲಾತಿ ಅನಿವಾರ್ಯ ಮತ್ತು ರಾಜಕೀಯ ಪ್ರವೇಶ ಮಹಿಳೆಯರ ಹಕ್ಕು ಕೂಡ ಎಂದು ತಿಳಿಸಿದ್ದಾರೆ.

<><><>

ಮಹಿಳೆಯರಿಗೆ ಸಂವಿಧಾನದಡಿ ಸಿಗಬೇಕಿದ್ದ ರಾಜಕೀಯ ಹಕ್ಕನ್ನು ವಿರೋಧಪಕ್ಷಗಳು ಕಸಿದುಕೊಂಡಿವೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಮಹಿಳೆಯರ ಸಬಲೀಕರಣಕ್ಕಾಗಿ ಐತಿಹಾಸಿಕ ತೀರ್ಮಾನ ಕೈಗೊಂಡು ಈ ಮಸೂದೆ

ಮಂಡಿಸಿದ್ದರು ಆದರೆ ಮಸೂದೆಗೆ ಅಗತ್ಯ ಬೆಂಬಲ ನೀಡದ ಕಾಂಗ್ರೆಸ್ ಮಹಿಳೆಯರು ಸಂಸತ್ ಮತ್ತು ವಿಧಾನಸಭೆಗಳನ್ನು ಪ್ರವೇಶಿಸುವ ಕನಸನ್ನು ಸಾಕಾರಗೊಳ್ಳಲು ಅಡ್ಡಿಪಡಿಸಿದೆ ಎಂದು ಆರೋಪಿಸಿದರು. ಕ್ಷೇತ್ರ ಮರುವಿಂಗಡನೆಯ ಪ್ರಕ್ರಿಯೆಯನ್ನು ವಿರೋಧಪಕ್ಷಗಳು ನೆಪಮಾತ್ರವಾಗಿ ಬಳಸಿಕೊಂಡು ಮಹಿಳೆಯರ ಪ್ರಾತಿನಿಧ್ಯಕ್ಕೆ ತಡೆ ಒಡ್ಡಿವೆ ಎಂದು ತಿಳಿಸಿದರು.

<><><><>

ಮಹಿಳಾ ಮೀಸಲಾತಿ ಮಸೂದೆಗೆ ಅಡ್ಡಗಾಲು ಹಾಕಿದ ಕಾಂಗ್ರೆಸ್ ಹಾಗೂ 'ಇಂಡಿ' ಮೈತ್ರಿಕೂಟದ ವಿರೋಧಾಭಾಸ ಅಕ್ಷಮ್ಯ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ. ದೇಶದ ೭೦ ಕೋಟಿ ಮಹಿಳೆಯರ ಶೇಕಡ ೩೩ರಷ್ಟು ಮೀಸಲಾತಿಯ ಹಕ್ಕನ್ನು ದಶಕಗಳ ಕಾಲ ಕಸಿದುಕೊಂಡವರನ್ನು ಇತಿಹಾಸ ಎಂದಿಗೂ ಕ್ಷಮಿಸುವುದಿಲ್ಲ ಎಂದಿದ್ದಾರೆ. ಬಹು ನಿರೀಕ್ಷಿತ ಮಹಿಳಾ ಮೀಸಲಾತಿ ಕುರಿತ ಸಂವಿಧಾನ ತಿದ್ದುಪಡಿ ಮಸೂದೆಯ ವಿರುದ್ಧ ಮತದಾನ ಮಾಡಿ, ಲೋಕಸಭೆಯಲ್ಲಿ ಮಸೂದೆ ಸೋಲುವಂತೆ ಮಾಡಿದ ಪ್ರತಿಪಕ್ಷಗಳ ನಿಲುವನ್ನು ಬಿಜೆಪಿ ರಾಜ್ಯ ಉಪಾಧ್ಯಕ್ಷೆ, ಮಾಜಿ ಶಾಸಕಿ ರೂಪಾಲಿ ನಾಯ್ಕ ಟೀಕಿಸಿದ್ದಾರೆ. ಮಸೂದೆ ಸೋಲಿಸುವ ಮಹಿಳಾ ವಿರೋಧಿ ನಿಲುವನ್ನು ವಿರೋಧಪಕ್ಷಗಳು ಪ್ರದರ್ಶಿಸಿದ್ದು, ಮುಂದಿನ ದಿನಗಳಲ್ಲಿ ಮಸೂದೆಯ ಪರವಾಗಿ ಹೋರಾಟ ನಡೆಸಲಾಗುವುದು ಎಂದಿದ್ದಾರೆ.

<><><><>

ತುಮಕೂರು ಜಿಲ್ಲೆಯ ವಿವಿಧ ರಸ್ತೆಗಳಲ್ಲಿ ಪದೇ ಪದೇ ಅಪಘಾತ ನಡೆಯುವ ಸ್ಥಳಗಳನ್ನು ಶೀಘ್ರ ಗುರುತಿಸುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ಅವರಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ರಸ್ತೆ ಸುರಕ್ಷಾ ಸಲಹಾ ಸಮಿತಿ ಸಭೆ ನಡೆಸಿದ ಅವರು, ರಸ್ತೆ ಸುರಕ್ಷಾತಾ ದೃಷ್ಟಿಯಿಂದ ಪದೇ ಪದೇ ಅಪಘಾತ ಸಂಭವಿಸುವ ಜಾಗಗಳನ್ನು ಗುರುತಿಸುವಂತೆ ಈ ಹಿಂದಿನ ಸಭೆಯಲ್ಲಿ ತಿಳಿಸಲಾಗಿತ್ತು ಈ ಕಾರ್ಯ ಇನ್ನೂ ಪೂರ್ಣವಾಗಿಲ್ಲ. ಇದನ್ನು ತಕ್ಷಣವೇ ಪೂರ್ಣಗೊಳಿಸಿ ರಸ್ತೆ ಅಪಘಾತಗಳನ್ನು ನಿಯಂತ್ರಿಸಲು ಕ್ರಮ ವಹಿಸಬೇಕು ಎಂದು ಸೂಚಿಸಿದರು.

<><><><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು

ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩.೩೦ಕ್ಕೆ ಆರಂಭವಾಗಲಿದೆ. ಈವರೆಗೆ ಆಡಿರುವ ೫ ಪಂದ್ಯಗಳ ಪೈಕಿ ೪ ರಲ್ಲಿ ಗೆದ್ದು, ಒಂದು ಪಂದ್ಯ ಸೋತಿರುವ ಆರ್‌ಸಿಬಿ ೮ ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ೨ನೇ ಸ್ಥಾನದಲ್ಲಿದ್ದರೆ, ೪ ಪಂದ್ಯಗಳನ್ನಾಡಿರುವ ಡೆಲ್ಲಿ ತಂಡ ೨ ಪಂದ್ಯಗಳಲ್ಲಿ ಗೆಲುವು ಕಂಡು ೪ ಅಂಕಗಳೊಂದಿಗೆ ೬ನೇ ಸ್ಥಾನದಲ್ಲಿದೆ. ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತ ಹೆಚ್ಚಿನ ಜನದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಪೊಲೀಸ್ ಬಿಗಿಬಂದೋಬಸ್ತ್ ಕೈಗೊಳ್ಳಲಾಗಿದೆ. ಪಂದ್ಯ ನೋಡಲು ಆಗಮಿಸುವವರ ಸುಗಮ ಸಂಚಾರಕ್ಕೆ ಬಸ್ ಹಾಗೂ ಮೆಟ್ರೋ ರೈಲು ಸೇವೆಯಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>